**ಅ.ದಾ.ಸಂ. 187/2023 ಪಿ.ಡಬ್ಲೂ.1**

**<u>ದಿನಾಂಕಃ 17.10.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು:- ಪ್ರತಿವಾದಿ ಪರ ಶ್ರೀ ಎಸ್.ಬಿ.ಡಿ. ವಕೀಲರಿಂದಃ</u>**

1) ನಾನು ಬಿಕಾಂ ಪಧವೀಧರ. ನಾನು ಬೆಂಗಳೂರಿನಲ್ಲಿ ಖಾಸಗಿ ಕೆಲಸ ಮಾಡುತ್ತೇನೆ. ನಾನು ಆಡಿಟಿಂಗ್ ಕೆಲಸವನ್ನು ಮಾಡುತ್ತೇನೆ. ನಾನು ಮತ್ತು ಪ್ರತಿವಾದಿ ಒಂದೇ ಗ್ರಾಮದವರು ಎಂದರೆ ಸರಿ. ಆಕೆ ನನಗೆ ಕಳೆದ 15 ವರ್ಷಗಳಿಂದ ಪರಿಚಯ ಇರುತ್ತಾರೆ. ಪ್ರತಿವಾದಿಯ ಗಂಡ ಕೆಇಬಿ ಕಛೇರಿಯಲ್ಲಿ ಕೆಲಸ ಮಾಡುತ್ತಿದ್ದರು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಆದರ ಆತನ ಪರಿಚಯ ಇತ್ತು. ಪ್ರತಿವಾದಿಯ ಮಗಳ ಪರಿಚಯ ಇದೆ. ನಾನು ಪ್ರತಿವಾದಿಯ ಗಂಡನಿಗೆ 2 ಲಕ್ಷ ಹಣವನ್ನು ಬ್ಯಾಂಕಿನ ಮೂಲಕ ಸಾಲ ಕೊಡಿಸುವುದಾಗಿ ಹೇಳಿದ್ದೆನು ಎಂದರೆ ಸರಿಯಲ್ಲ. ನಾನು ಆಕೆಯ ಗಂಡನನ್ನು ಪುಸಲಾಯಿಸಿ 2 ಲಕ್ಷ ಹಣವನ್ನು ಸಾಲವಾಗಿ ಕೊಡಿಸಿದ್ದೆನು ಎಂದರೆ ಸರಿಯಲ್ಲ. ಆದ ಕಾರಣ ನಾನು ಪ್ರತಿವಾದಿಗೆ ಆಕೆಯ ಮನೆಯನ್ನು ಅಡಮಾನ ಇಟ್ಟು ಹಣ ಪಡೆದು ಸಾಲ ತೀರಿಸುವಂತೆ ಹೇಳಿದ್ದೆನು ಎಂದರೆ ಸರಿಯಲ್ಲ. ನಾನು ಆಕೆಯ ಮನೆಯ ಮೇಲೆ ಸಾಲ ಕೊಡಿಸುವುದಾಗಿ ಹೇಳಿ ಆಕೆಯ ಮನೆಗೆ ಸೇರಿದ ದಾಖಲೆಗಳನ್ನು ಪಡೆದುಕೊಂಡು ಆಕೆಯನ್ನು ಉಪನೊಂದಣಾಧಿಕಾರಿಗಳ ಕಛೇರಿಗೆ ಕರೆದುಕೊಂಡು ಹೋಗಿದ್ದೆನು ಎಂದರೆ ಸರಿಯಲ್ಲ. ಆ ರೀತಿ ದಿಃ22.12.2018 ರಂದು ನಾನು ಉಪನೊಂದಣಾಧಿಕಾರಿ ಕಚೇರಿಯಲ್ಲಿ ಪ್ರತಿವಾದಿಯ ಮೂಲಕ ದಾವಾ ಸ್ವತ್ತನ್ನು ನನ್ನ ಹೆಸರಿಗೆ ನೊಂದಾಯಿತ ಕ್ರಯ ಪತ್ರವನ್ನು ಆಕೆಗೆ ತಿಳಿಯದಂತೆ ಮಾಡಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಕ್ರಯ ಪತ್ರವನ್ನು 2 ಲಕ್ಷ ಸಾಲ ಪಡೆಯುವ ಉದ್ದೇಶದಿಂದ ಮಾಡಿಕೊಂಡಿರುವುದಾಗಿ ಸುಳ್ಳು ಹೇಳಿ ದಾಖಲೆಯನ್ನು ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯು ನನ್ನಿಂದ ಪಡೆದಿದ್ದ 2 ಲಕ್ಷ ಹಣವನ್ನು ನನಗೆ ತಿಳಿದಂತೆ ನನ್ನ ಸಂಬಂಧಿಕರಾದ ಲಕ್ಷ್ಮೀ ರವರ ಖಾತೆಗೆ ಪ್ರತಿ ತಿಂಗಳು ಜಮೆ ಮಾಡಿ ತೀರುವಳಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

<u>ಮುಂದುವರಿದ ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದ ಮೇರೆಗೆ ಪ್ರಕರಣವನ್ನು ಮುಂದೂಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**